ಮಧುಗಿರಿಯ ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ ನ್ಯಾಯಾಲಯದಲ್ಲಿ

**ಸಿ.ಸಿ. ಸಂಖ್ಯೆ: 74/2023**

ಪ್ರ.ವ.ಬೋ.ತಾಃ 24-06-2026

ಚಾಸಾಃ 10 ಫ್ರಾಸಾಃ 10

| | |
|---|---|
| ಸಾಕ್ಷಿಯ ಹೆಸರು | ನಾಗರೆಡ್ಡಿ |
| ತಂದೆ/ಗಂಡನ ಹೆಸರು | ಸಂಜೀವಪ್ಪ |
| ವಯಸ್ಸು | 63 ವರ್ಷ |
| ವೃತ್ತಿ | ವ್ಯವಸಾಯ |
| ವಾಸ | ಹಂದ್ರಾಳು, ಮಧುಗಿರಿ ತಾ. |

**ಮುಖ್ಯ ವಿಚಾರಣೆಃ- ಮಾನ್ಯ ಸ.ಸ.ಅ. ರವರಿಂದಃ-**

ನಾನು ಬ್ಯಾಲ್ಯ ಗ್ರಾಮ ಪಂಚಾಯಿತಿಯ 1995 ಮತ್ತು 2005 ನೇ ಸಾಲಿನಲ್ಲಿ ಸದಸ್ಯನಾಗಿದ್ದೆನು. ಆರೋಪಿ ಗೊತ್ತು. ಚಾಸಾ.4 ಮತ್ತು 5 ರವರು ಗೊತ್ತು. ಈ ಕೇಸಿನ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಸಸಅ ರವರ ವಿನಂತಿ ಮೇರೆಗೆ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ- ಮಾನ್ಯ ಸ.ಸ.ಅ. ರವರಿಂದಃ-**

ನಾನು 2010 ನೇ ಸಾಲಿನಿಂದ 2015 ರವರಗೆ ಬ್ಯಾಲ್ಯ ಗ್ರಾಮ ಪಂಚಾಯಿತಿಯ ಸದಸ್ಯನಾಗಿದ್ದೆನು ಎಂದರೆ ಸರಿ. 1998 ನೇ ಸಾಲಿನಲ್ಲಿ ಚಾಸಾ.4 ರವರು ಆ ಗ್ರಾಮ ಪಂಚಾಯಿತಿಯ ವಾಟರ್ ಮನ್ ಆಗಿದ್ದರು ಎಂದರೆ ಸರಿ. ಆನಂತರ 2007 ನೇ ಸಾಲಿನಲ್ಲಿ ಚಾಸಾ.4 ರವರು ಬಿಲ್ ಕಲೆಕ್ಟರ್ ಆಗಿ ಪದೋನ್ನತಿ ಹೊಂದಿದರು ಎಂದರೆ ನನಗೆ ಗೊತ್ತಿಲ್ಲ.

ಚಾಸಾ.4 ರವರು 2001-02 ನೇ ಸಾಲಿನಲ್ಲಿ ಬ್ಯಾಲ್ಯ ಗ್ರಾಮ ಪಂಚಾಯಿತಿವತಿಯಿಂದ ಲಿಡ್ಕರ್ ವಸತಿ ಯೋಜನೆಯಡಿ ಮನೆ ನಿರ್ಮಿಸಲು ರೂ.ಹತ್ತು ಸಾವಿರ ಹಣವನ್ನು ಪಡೆದುಕೊಂಡಿದ್ದರು ಎಂದರೆ ಸರಿಯಲ್ಲ. ಆ ಮನೆ ಬಿದ್ದು ಹೋದ ಕಾರಣ ಚಾಸಾ.4 ರವರ ಹೆಂಡತಿ ಚಾಸಾ.5 ರವರು 2009 ನೇ ಸಾಲಿನಲ್ಲಿ ಹಂದ್ರಾಳು ಗ್ರಾಮ ಠಾಣಾ ವ್ಯಾಪ್ತಿಯಲ್ಲಿ ನಿವೇಶನ ಕೋರಿ ಪಂಚಾಯಿತಿಗೆ ಅರ್ಜಿ ಸಲ್ಲಿಸಿದ್ದ್ರು ಎಂದರೆ ಸರಿಯಲ್ಲ. ಆ ಕಾರಣ ಗ್ರಾಮ ಪಂಚಾಯಿತಿಯಲ್ಲಿ ಸಾಮಾನ್ಯ ಸಭೆ ಕರೆದು ಚಾಸಾ.5 ಹಾಗೂ ಇತರ ಐದು ಜನರಿಗೆ 30x40 ಅಳತೆಯ ನಿವೇಶನ ಮಂಜೂರಾಗಿತ್ತು ಎಂದರೆ ಸರಿಯಲ್ಲ. ನಾನು 2013-14 ನೇ ಸಾಲಿನಲ್ಲಿ ಆ ಪಂಚಾಯಿತಿಯ ಸದಸ್ಯನಾಗಿದ್ದು, ಚಾಸಾ.5 ರವರಿಗೆ ಇಂದಿರಾ ಆವಾಜ್ ಯೋಜನೆಯಡಿ ಒಟ್ಟು ನಾಲ್ಕು ಹಂತಗಳಲ್ಲಿ ರೂ.1,19,800/- ಹಣವನ್ನು ಮಂಜೂರು ಮಾಡಿದ್ದು, ಆ ಹಣದಲ್ಲಿ ಮನೆಯನ್ನು ಕಟ್ಟಿಕೊಂಡಿದ್ದರು ಎಂದರೆ ಸರಿಯಲ್ಲ. ಈ ಬಗ್ಗೆ ನಾನು ಪೊಲೀಸರ ಮುಂದೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಆ ಅಲ್ಲಗೆಳೆದ ಹೇಳಿಕೆಯನ್ನು ನಿಪಿ.14 ಎಂದು ಗುರುತಿಸಲಾಯಿತು. ಈ ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ- ಆರೋಪಿತರ ಪರ ವಕೀಲರಿಂದಃ-** ಏನೂ ಇಲ್ಲ.

ಮರು ವಿಚಾರಣೆಃ- ಇಲ್ಲಾ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ನುಡಿದಂತೆ ಗಣಕೀಕೃತಗೊಳಿಸಲಾಯಿತು)

ಓ.ಹೇ.ಸಾ.ಸ.ಇ.ಒ.

ಪ್ರಧಾನ ಹಿರಿಯ ಸಿವಿಲ್ ಜಡ್ಜ್
ಮತ್ತು ಜೆಎಂಎಫ್‌ಸಿ, ಮಧುಗಿರಿ